ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಶುಕ್ರವಾರ, ದಿನಾಂಕ: 25ನೇ ಸೆಪ್ಟಂಬರ್, 2020

ನಂಜನಗೂಡು ನೂತನ ಬಸ್ ನಿಲ್ದಾಣಕ್ಕೆ ಬಸ್‌ಗಳು ಹೋಗದೇ ಇರುವ ಕುರಿತು

ಶ್ರೀ ಎಸ್.ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

739 (821) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮೈಸೂರಿನಿಂದ ನಂಜನಗೂಡಿಗೆ ಮತ್ತು ನಂಜನಗೂಡು ಮೂಲಕ ಚಾಮರಾಜನಗರ. ಗುಂಡ್ಲುಪೇಟೆ ಕಡೆಗೆ ಸಂಚರಿಸುವ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಬಸ್‌ಗಳು ನಂಜನಗೂಡಿನಲ್ಲಿ ನೂತನವಾಗಿ ನಿರ್ಮಿಸಿರುವ ಬಸ್ ನಿಲ್ದಾಣಕ್ಕೆ ಹೋಗಿ ನಿಲುಗಡೆ ಮಾಡದೆ. ಹಳೆಯ ಬಸ್ ನಿಲ್ದಾಣದಲ್ಲೇ ನಿಲುಗಡೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ನೂತನ ಬಸ್ ನಿಲ್ದಾಣವು ರೈಲ್ವೆ ನಿಲ್ದಾಣ, ಖಾಸಗಿ ಬಸ್ ನಿಲ್ದಾಣ, ದೇವಾಲಯಗಳಿಗೆ ಸಮೀಪದಲ್ಲಿದ್ದರೂ ಬಸ್‌ಗಳು ಇಲ್ಲಿಗೆ ಹೋಗದಿರಲು ಕಾರಣಗಳೇನು;

(ಆ) ನೂತನ ಬಸ್ ನಿಲ್ದಾಣದಲ್ಲೇ ಬಸ್‌ಗಳನ್ನು ನಿಲುಗಡೆ ನೀಡುವಂತೆ ರಾಜ್ಯ ರಸ್ತೆ ಸಾರಿಗೆ ಬಸ್ ವಾಹನ ಚಾಲಕರಿಗೆ, ಸಾರಿಗೆ ಸಂಸ್ಥೆ ಅಧಿಕಾರಿಗಳಿಗೆ ಕಟ್ಟುನಿಟ್ಟಾದ ಸೂಚನೆ ನೀಡಲಾಗುವುದೇ ;

(ಇ) ನೂತನ ಬಸ್ ನಿಲ್ದಾಣದಲ್ಲಿ ಇನ್ನೂ ಕೆಲವು ಕಾಮಗಾರಿಗಳು ನಡೆಯುತ್ತಿವೆಯೇ ; ಈ ಕಾಮಗಾರಿಗಳನ್ನು ಕೂಡಲೇ ಪೂರ್ಣಗೊಳಿಸಿ, ನಿಲ್ದಾಣವನ್ನು ಸುಸಜ್ಜಿತಗೊಳಿಸಲಾಗುವುದೇ?